# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿನ ಪ್ರಶ್ನೆ ಸಂಖ್ಯೆ | : | 448 |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 13-08-2025 |

| | ಪ್ರಶ್ನೆ | ಉತ್ತರ |
|---|---|---|
| ಅ. | ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ನಗರಗಳಲ್ಲಿ Rapido ಸೇರಿದಂತೆ ಬೈಕ್ ಟ್ಯಾಕ್ಸಿ ಸೇವೆಗಳನ್ನು ಅಧಿಕೃತವಾಗಿ ಅಂಗೀಕರಿಸಲು ಸರ್ಕಾರದ ನಿಲುವೇನು: | ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:14.09.2018 ರಂದು ನಡೆದ ಸಭೆಯಲ್ಲಿ ತೀರ್ಮಾನಿಸಿರುವಂತೆ, ಸರ್ಕಾರದ ದಿನಾಂಕ:20.09.2018 ರ ಆದೇಶದಲ್ಲಿ, ಬೆಂಗಳೂರು ನಗರದಲ್ಲಿ ಬೈಕ್ ಟ್ಯಾಕ್ಸಿ ಯೋಜನೆ ಜಾರಿಗೊಳಿಸುವ ಕುರಿತಂತೆ ಸಾಧಕ-ಬಾಧಕಗಳನ್ನು ಪರಿಶೀಲಿಸಲು ವ್ಯವಸ್ಥಾಪಕ ನಿರ್ದೇಶಕರು, ಬಿ.ಎಂ.ಆರ್.ಸಿ.ಎಲ್. ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ ಆದೇಶಿಸಲಾಗಿತ್ತು.<br><br>ಸದರಿ ಸಮಿತಿಯು ದಿನಾಂಕ:22.05.2019 ರಂದು ಸಲ್ಲಿಸಿರುವ ವರದಿಯಲ್ಲಿ ಬೈಕ್ ಟ್ಯಾಕ್ಸಿ ಯೋಜನೆಯನ್ನು ಜಾರಿಗೊಳಿಸುವುದು ಕಾರ್ಯಸಾಧು ಆಗಿರುವುದಿಲ್ಲವೆಂದು ವರದಿಯನ್ನು ಸಲ್ಲಿಸಿತ್ತು.<br><br>ಏತನ್ಮಧ್ಯೆ, ಸರ್ಕಾರದ ಸರ್ಕಾರದ ಅಧಿಸೂಚನೆ ಸಂಖ್ಯೆ: ಟಿಡಿ 160 ಟಿಡಿಓ 2020, ದಿನಾಂಕ:14-07-2021ರಲ್ಲಿ ಸಾರ್ವಜನಿಕ ಸಾರಿಗೆಗಾಗಿ ಮೊದಲ ಮತ್ತು ಕೊನೆಯ ಹಂತದ ಸಾರಿಗೆ ಸಂಪರ್ಕವನ್ನು ಕಲ್ಪಿಸುವ ಉದ್ದೇಶದಿಂದ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆಯನ್ನು ಜಾರಿಗೊಳಿಸಲಾಗಿತ್ತು. ಸದರಿ ಯೋಜನೆಯು ಬ್ಯಾಟರಿ ಚಾಲಿತ ವಿದ್ಯುತ್ ಮೋಟಾರು ಸೈಕಲ್ ಅಥವಾ ವಿದ್ಯುತ್ ಬೈಕ್‌ಗಳಿಗೆ ಮಾತ್ರ ಅನ್ವಯವಾಗತಕ್ಕದ್ದು ಎಂದು ಆದೇಶಿಸಲಾಗಿತ್ತು.<br><br>ಆದರೆ, ಪ್ರಸ್ತುತ ಕೆಲವು ಖಾಸಗಿ ಆಪ್ ಆಧಾರಿತ ಸಂಸ್ಥೆಗಳು ಮೋಟಾರು ವಾಹನ ಕಾಯ್ದೆ ಮತ್ತು ಅದರಡಿ ರಚಿತವಾದ ನಿಯಮಗಳನ್ನು ಉಲ್ಲಂಘಿಸಿ ಅನಧಿಕೃತವಾಗಿ ಸಾರಿಗೇತರ (Non-Transport) Internal Combustion Engine (ಪೆಟ್ರೋಲ್ ದ್ವಿ-ಚಕ್ರ) ವಾಹನಗಳನ್ನು ಉಪಯೋಗಿಸುತ್ತಿದ್ದರು. ಈ ಬಗ್ಗೆ ಹಲವಾರು ದೂರುಗಳು ಸಹ ಬಂದಿರುತ್ತವೆ.<br><br>ಹಾಗಾಗಿ, ಕಾನೂನಿನಲ್ಲಿ ಪೆಟ್ರೋಲ್ ದ್ವಿ-ಚಕ್ರ ವಾಹನಗಳಿಗೆ ಅವಕಾಶವಿಲ್ಲದಿರುವುದರಿಂದ ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಟಿಡಿ 160 ಟಿಡಿಓ 2020, ದಿನಾಂಕ: 06.03.2024 ರಲ್ಲಿ ರದ್ದುಗೊಳಿಸಿ ಆದೇಶಿಸಲಾಗಿದೆ. |
| ಆ. | ಈ ಸೇವೆ ಅನಧಿಕೃತ ಎಂದು ಪರಿಗಣಿಸುವುದರಿಂದ ಸಾವಿರಾರು ಯುವಕರಿಗೆ ಉದ್ಯೋಗವಕಾಶ ಕಳೆದುಕೊಂಡಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ: | |
| ಇ. | Rapido ಸೇವೆ ಸಾರ್ವಜನಿಕರಿಗೆ ಅನುಕೂಲಕಾರಿಯಾಗಿ ಕೆಲಸ ಮಾಡುತ್ತಿರುವ ಹಿನ್ನಲೆಯಲ್ಲಿ ಇಂಥ ಸೇವೆಗಳಿಗೆ ಸರ್ಕಾರದಿಂದ ಮಾನ್ಯತೆ ನೀಡುವ ಕುರಿತು ಮಾರ್ಗಸೂಚಿ ಮಾನದಂಡಗಳನ್ನು ರೂಪಿಸಲಾಗಿದೆಯೇ: | |
| ಈ. | ಇಂತಹ ಹೊಸ ತಂತ್ರಜ್ಞಾನ ಆಧಾರಿತ ಸಾರಿಗೆ ಸೇವೆಗಳನ್ನು ಉತ್ಸಾಹ ಪೂರ್ಣವಾಗಿ ಉತ್ತೇಜಿಸುವ ಬಗ್ಗೆ ಸರ್ಕಾರದ ನಿಲುವೇನು? | |

| | | |
|---|---|---|
| | | ಓಲಾ, ಉಬರ್, ರಾಪಿಡೋ ಕಂಪನಿಗಳು ರಾಜ್ಯದಲ್ಲಿ ಬೈಕ್ ಟ್ಯಾಕ್ಸಿ ಸೇವೆಯನ್ನು ನಿರ್ವಹಿಸುವುದಕ್ಕೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಮುಂದೆ ರಿಟ್ ಅರ್ಜಿಗಳ ಸಂಖ್ಯೆ: 6421/2022 (MV), 14627/2021 (MV), 19869/2021 (MV) ಮತ್ತು 24569/2023 (MV) ಗಳನ್ವಯ ಪ್ರಕರಣಗಳನ್ನು ದಾಖಲಿಸಿದ್ದು, ಸದರಿ ಪ್ರಕರಣಗಳನ್ನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ:02-04-2025 ರಂದು ಹೊರಡಿಸಿದ ಆದೇಶದಲ್ಲಿ ವಜಾಗೊಳಿಸಿರುತ್ತದೆ.<br><br>ಮೇಲ್ಕಂಡಂತೆ ಮಾನ್ಯ ಉಚ್ಚ ನ್ಯಾಯಾಲಯದ ಏಕ ಸದಸ್ಯ ಪೀಠವು ದಿನಾಂಕ:02-04-2025 ರಂದು ಹೊರಡಿಸಿರುವ ಆದೇಶದಿಂದ ಬಾಧಿತರಾಗಿ M/s Uber India Systems Private Limited ಇವರು WA No: 848/2025 (MV), Varikruti Mahendra Reddy ಇವರು WA No: 863/2025 (MV), M/s ANI Technologies Pvt. Ltd., ಇವರು WA No: 906/2025 (MV), Roppen Transportation Services Pvt Ltd ಇವರು WA No: 948/2025 (MV) ಮತ್ತು Bike Taxi Welfare Association WA No: 962/2025 (MV) ಇವರುಗಳು ಮಾನ್ಯ ಉಚ್ಚ ನ್ಯಾಯಾಲಯದ ದ್ವಿ-ಸದಸ್ಯ ಪೀಠದ ಮುಂದೆ ಸರ್ಕಾರದ ವಿರುದ್ಧ ಪ್ರಕರಣಗಳನ್ನು ದಾಖಲಿಸಿರುತ್ತಾರೆ.<br><br>ಪ್ರಸ್ತುತ ಸದರಿ ಪ್ರಕರಣಗಳು ಮಾನ್ಯ ಉಚ್ಚ ನ್ಯಾಯಾಲಯದ ದ್ವಿ-ಸದಸ್ಯ ಪೀಠದ ಮುಂದೆ ವಿಚಾರಣೆಗೆ ಬಾಕಿ ಇರುತ್ತವೆ. |

**ಟಿಡಿ 52 ಟಿಡಿಕ್ಯೂ 2025**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು.